ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಎಲ್‌ಆರ್‌ಡಿಸಿ/2016-17. 1354

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ:11-05-2016

-:ಸುತ್ತೋಲೆ:-

ವಿಷಯ: ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಮಾನವ ಹಕ್ಕುಗಳ ವಿಷಯವನ್ನು ಪಠ್ಯಕ್ರಮದ ಒಂದು ಭಾಗವಾಗಿ ಬೋಧನೆ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ,(ಉನ್ನತ ಶಿಕ್ಷಣ) ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ 156 ಟಿಪಿಇ 2015, ದಿ:06.04.2016.
2. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಉಶಿಪ/ಮಾನವಹಕ್ಕು/02/2015-16/675, ದಿ:22.01.2016.

------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳನ್ವಯ ದಿ:28.12.2015 ರಂದು ನಡೆದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸಾಮಾನ್ಯ ಸಭೆಯಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಮಾನವಹಕ್ಕುಗಳ ವಿಷಯವನ್ನು ಪಠ್ಯಕ್ರಮದ ಒಂದು ಭಾಗವಾಗಿ ಅಳವಡಿಸುವ ಬದಲಾಗಿ ಮಾನವಹಕ್ಕುಗಳ ವಿಷಯದ ಬಗ್ಗೆ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಅರಿವು ಮೂಡಿಸುವ ಸಲುವಾಗಿ ಸೂಕ್ತ ಉಪನ್ಯಾಸ/ ಪ್ರವಚನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಲ್ಲಿ ಮಾನವಹಕ್ಕುಗಳ ವಿಷಯದ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಸಲುವಾಗಿ ಸೂಕ್ತ ಉಪನ್ಯಾಸ, ಕಾರ್ಯಗಾರ, ಸಮ್ಮೇಳನ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

11/5/16
11/5/16

ಇವರಿಗೆ, ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿ, ಇ-ಆಡಳಿತ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.